**Akashvani : Bangalore**
**Regional Bulletin In Kannada**
**04.02.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**04.02.2025 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಬೆಂಗಳೂರಿನಲ್ಲಿ ನಾಳೆ ಉನ್ನತ ಶಿಕ್ಷಣ ಸಚಿವರ ರಾಷ್ಟ್ರೀಯ ಸಮಾವೇಶ**

**೨. ಬೆಂಗಳೂರು ಏರ್ ಶೋ ಹಿನ್ನೆಲೆ ; ನವದೆಹಲಿಯಲ್ಲಿ ರಕ್ಷಣಾ ಸಚಿವರೊಂದಿಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಚರ್ಚೆ**

**೩. ಸಣ್ಣ ಹಣಕಾಸು ಸಂಸ್ಥೆಗಳ ಹಾವಳಿ ತಡೆಯಲು ಸರ್ಕಾರ ವಿಫಲ ; ವಿಪಕ್ಷ ನಾಯಕ ಆರ್. ಅಶೋಕ ಆರೋಪ**

**೪. ರಾಜ್ಯ ಮುಖ್ಯ ಮಾಹಿತಿ ಆಯುಕ್ತರು ಮತ್ತು ೭ ಆಯುಕ್ತರಿಗೆ ಪ್ರಮಾಣವಚನ ಬೋಧಿಸಿದ ರಾಜ್ಯಪಾಲರು**

**೫. ೩೮ನೇ ರಾಷ್ಟ್ರೀಯ ಕ್ರೀಡಾಕೂಟ ; ೨೨ ಚಿನ್ನ, ೧೦ ಬೆಳ್ಳಿಯೊಂದಿಗೆ ಅಗ್ರಸ್ಥಾನ ಕಾಯ್ದುಕೊಂಡ ಕರ್ನಾಟಕ**

**<><*<><>*><>**

ವಿಶ್ವ ವಿದ್ಯಾಲಯ ಅನುದಾನ ಆಯೋಗ ಕುಲಪತಿಗಳ ನೇಮಕ ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಪಟ್ಟಂತೆ ಹೊರಡಿಸಿರುವ ಕರಡು ನಿಯಾಮಾವಳಿಗಳ ಕುರಿತು ಚರ್ಚಿಸಲು ನಾಳೆ ಬೆಂಗಳೂರಿನಲ್ಲಿ ಉನ್ನತ ಶಿಕ್ಷಣ ಸಚಿವರ ರಾಷ್ಟ್ರೀಯ ಸಮಾವೇಶ ನಡೆಯಲಿದೆ. ಸಮಾವೇಶದಲ್ಲಿ ಏಳು ರಾಜ್ಯಗಳ ಸಚಿವರು ಪಾಲ್ಗೊಳ್ಳಲಿದ್ದಾರೆ. ದೆಹಲಿಯಲ್ಲಿ ಚುನಾವಣೆ ನಡೆಯುತ್ತಿರುವುದರಿಂದ ದೆಹಲಿ ಉನ್ನತ ಶಿಕ್ಷಣ ಸಚಿವರು ಪಾಲ್ಗೊಳ್ಳುತ್ತಿಲ್ಲ. ಉಳಿದಂತೆ ಜಮ್ಮು-ಕಾಶ್ಮೀರ, ಹಿಮಾಚಲಪ್ರದೇಶ, ಜಾರ್ಖಂಡ್, ತೆಲಂಗಾಣ, ತಮಿಳುನಾಡು ಹಾಗೂ ಕೇರಳದ ಉನ್ನತ ಶಿಕ್ಷಣ ಸಚಿವರು ಪಾಲ್ಗೊಳ್ಳಲಿದ್ದಾರೆ.

**<><*<><>*><>**

ಬೆಂಗಳೂರಿನಲ್ಲಿ ಇದೇ ೧೦ ರಿಂದ ೧೪ರವರೆಗೆ ಏರೋ ಇಂಡಿಯಾ ೨೦೨೫ ಆಯೋಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ನವದೆಹಲಿಯಲ್ಲಿಂದು ಕೇಂದ್ರ ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರೊಂದಿಗೆ ಏರ್ ಶೋ ಹಾಗೂ ಕರ್ನಾಟಕದ ಪ್ರಮುಖ ರಕ್ಷಣಾ ವಿಷಯಗಳ ಕುರಿತು ಚರ್ಚೆ ನಡೆಸಿದರು. ಬಳಿಕ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ರಕ್ಷಣಾ ಸಚಿವರೊಂದಿಗಿನ ಸಭೆ ಫಲಪ್ರದವಾಗಿದ್ದು, ಈ ವಲಯದಲ್ಲಿ ಸ್ವಾವಲಂಬನೆ ಹೆಚ್ಚಿಸಲು ನಿರಂತರ ಸಹಯೋಗವನ್ನು ಎದುರು ನೋಡುತ್ತಿರುವುದಾಗಿ ಎಂದು ತಿಳಿಸಿದ್ದಾರೆ.

**<><*<><>*><>**

ಇದೇ ೧೦ ರಿಂದ ೧೪ರವರೆಗೆ ಬೆಂಗಳೂರಿನ ಯಲಹಂಕದಲ್ಲಿ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ನಡೆಯಲಿರುವ ಈ ಹಿನ್ನೆಲೆಯಲ್ಲಿ ನಾಳೆಯಿಂದ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ವಿಮಾನಗಳ ಸಂಚಾರದಲ್ಲಿ ವ್ಯತ್ಯಯವಾಗಲಿದೆ. ನಾಳೆಯಿಂದ ಆರಂಭಗೊಂಡು ಕೆಲವು ತಾಸು ವಿಮಾನ ನಿಲ್ದಾಣದಲ್ಲಿ ಟೇಕಾಫ್, ಲ್ಯಾಂಡಿಂಗ್ ಸ್ಥಗಿತಗೊಳ್ಳಲಿದೆ. ಈ ಬಗ್ಗೆ ಬೆಂಗಳೂರು ವಿಮಾನ ನಿಲ್ದಾಣ ಆಡಳಿತ ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿದೆ. ಏರ್ ಶೋ ಕಾರ್ಯಕ್ರಮದ ಸುರಕ್ಷತೆಯ ದೃಷ್ಟಿಯಿಂದ ಈ ಕ್ರಮ ಕೈಗೊಳ್ಳಲಾಗಿದೆ. ಈ ನಡುವೆ ವೈಮಾನಿಕ ಪ್ರದರ್ಶನಕ್ಕೆ ಭೇಟಿ ನೀಡುವ ಎಲ್ಲ ಜನರ ಸುರಕ್ಷತೆ ಖಾತರಿ ಪಡಿಸಿಕೊಳ್ಳಲು ಗೃಹ ಸಚಿವಾಲಯ, ಬೆಂಗಳೂರು ಪೊಲೀಸ್, ಸಿಐಎಸ್‌ಎಫ್ ಮತ್ತು ಗುಪ್ತಚರ ಸಂಸ್ಥೆಗಳ ಸಹಯೋಗದೊಂದಿಗೆ ಬಹು ಹಂತದ ಭದ್ರತಾ ವ್ಯವಸ್ಥೆ ನಿಯೋಜಿಸಲಾಗುತ್ತಿದೆ. ದಿನದ ೨೪ ಗಂಟೆಯೂ ಸಿ ಸಿ ಟಿವಿ ಮೇಲ್ವಿಚಾರಣೆ ಇರಲಿದೆ. ಪ್ರದರ್ಶನ ಸ್ಥಳದಲ್ಲಿ ಸಂದರ್ಶಕರ ಸುಗಮ ಸಂಚಾರಕ್ಕಾಗಿ ೧೦೦ಕ್ಕೂ ಅಧಿಕ ಇ-ಕಾರ್ಟ್‌ಗಳ ವಿಶೇಷ ಬಳಕೆಗೆ ನಿರ್ಧರಿಸಲಾಗಿದೆ. ಅಲ್ಲದೇ ಈ ಪ್ರದೇಶದಲ್ಲಿ ಅನಧಿಕೃತ ಡ್ರೋನ್ ಚಟುವಟಿಕೆ ನಿರ್ವಹಿಸಲು ನಿಗ್ರಹ ಕ್ರಮಗಳೊಂದಿಗೆ ಕೆಂಪು ಡ್ರೋನ್ ವಲಯಗಳನ್ನು ಗೊತ್ತುಪಡಿಸಲಾಗಿದೆ. ಯಲಹಂಕ ವಾಯುಪಡೆ ನಿಲ್ದಾಣಕ್ಕೆ ಭೇಟಿ ನೀಡುವವರೆಗೆ ಉಚಿತ ಸಾರಿಗೆ ಸೌಲಭ್ಯಗಳನ್ನು ಒದಗಿಸಲು ರಕ್ಷಣಾ ಸಚಿವಾಲಯ ಎಸಿ, ವೊಲ್ವೊ, ಶೆಟಲ್ ಬಸ್‌ಗಳನ್ನು ಗುತ್ತಿಗೆ ಪಡೆದುಕೊಂಡಿದೆ.

**<><*<><>*><>**

ತಮ್ಮ ನೇತೃತ್ವದಲ್ಲಿ ಹೈಕಮಾಂಡ್ ನಾಯಕರನ್ನು ಸಚಿವರ ನಿಯೋಗ ಭೇಟಿ ಮಾಡಲಿದೆ ಎಂಬ ಸುದ್ದಿ ಸುಳ್ಳು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಂತಹ ಯಾವುದೇ ಬೆಳವಣಿಗೆ ಇಲ್ಲ. ಯಾವುದೇ ನಿಯೋಗವನ್ನು ಹೈಕಮಾಂಡ್ ಬಳಿ ತೆಗೆದುಕೊಂಡು ಹೋಗುತ್ತಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**ಧ್ವನಿ : ಪರಮೇಶ್ವರ್ (೨೦ ಸೆಕೆಂಡ್ಸ್)**

**<><*<><>*><>**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ರಾಜ್ಯದಲ್ಲಿ ಅಪರಾಧ ಪ್ರಕರಣಗಳು ಹಾಗೂ ಸಾವಿನ ಸಂಖ್ಯೆ ಹೆಚ್ಚಾಗಿದ್ದು ಸಣ್ಣ ಹಣಕಾಸು ಸಂಸ್ಥೆಗಳ ಹಾವಳಿ ತಡೆಗಟ್ಟಲು ಸರ್ಕಾರ ವಿಫಲವಾಗಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಹಾಸನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಸಣ್ಣ ಹಣಕಾಸು ಸಂಸ್ಥೆಗಳ ಕಿರುಕುಳದಿಂದ ಮೂವತ್ತಕ್ಕೂ ಹೆಚ್ಚು ಜನ ಸಾವನ್ನಪ್ಪಿದ್ದಾರೆ. ಅನೇಕ ಪ್ರಕರಣಗಳು ದಾಖಲಾದರೂ ಈವರೆಗೆ ಒಂದೇ ಒಂದು ಕಂಪನಿಯ ವಿರುದ್ಧ ಸರ್ಕಾರ ಕ್ರಮಕ್ಕೆ ಮುಂದಾಗಿಲ್ಲ ಎಂದು ದೂರಿದ್ದಾರೆ.

**ಧ್ವನಿ : ಆರ್. ಅಶೋಕ (೩೭ ಸೆಕೆಂಡ್ಸ್)**

**<><*<><>*><>**

ರಾಜಭವನದ ಗಾಜಿನಮನೆಯಲ್ಲಿ ಇಂದು ನಡೆದ ಸಮಾರಂಭದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನೂತನವಾಗಿ ನೇಮಕವಾದ ರಾಜ್ಯ ಮುಖ್ಯ ಮಾಹಿತಿ ಆಯುಕ್ತರು ಹಾಗೂ ರಾಜ್ಯ ಮಾಹಿತಿ ಆಯುಕ್ತರಾಗಿ

ನೇಮಕವಾದ ಏಳು  ಅಧಿಕಾರಿಗಳಿಗೆ ಪ್ರಮಾಣ ವಚನ ಬೋಧಿಸಿದರು. ರಾಜ್ಯ ಮುಖ್ಯ ಮಾಹಿತಿ ಆಯುಕ್ತರಾಗಿ ನಿವೃತ್ತ ಐಪಿಎಸ್ ಅಧಿಕಾರಿ ಆಶಿತ್ ಮೋಹನ್ ಪ್ರಸಾದ್ ಹಾಗೂ ರಾಮನ್. ಕೆ. ಡಾ.ಹರೀಶ್ ಕುಮಾರ್. ರುದ್ರಣ್ಣ ಹರ್ತಿಕೋಟೆ, ನಾರಾಯಣ ಜಿ. ಚಾನ್ನಳ್, ರಾಜಶೇಖರ ಎಸ್, ಬದ್ರುದ್ದೀನ್ ಕೆ ಮಾಣಿ ಮತ್ತು ನಿವೃತ್ತ ಐಎಎಸ್ ಅಧಿಕಾರಿ ಡಾ. ಮಮತಾ ಬಿ.ಆರ್ ರಾಜ್ಯ ಮಾಹಿತಿ ಆಯುಕ್ತರಾಗಿ ಪ್ರಮಾಣ ವಚನ ಸ್ವೀಕರಿಸಿದರು.

<><*<><>*><>

ಇದೇ ಮೊದಲ ಬಾರಿಗೆ ವಿಧಾನಸೌಧ ಆವರಣದಲ್ಲಿ  ಇದೇ ೨೭ ರಿಂದ ಮಾರ್ಚ್ ೩ ರವರೆಗೆ ಪುಸ್ತಕ ಮೇಳ ಆಯೋಜಿಸಲಾಗುತ್ತಿದೆ.  ಸಾಹಿತ್ಯಾಸಕ್ತರು, ಪ್ರಕಾಶಕರು, ಓದುಗರು, ಶಾಸಕರು, ವಿದ್ಯಾರ್ಥಿಗಳು ಹಾಗೂ ಅಧಿಕಾರಿಗಳು ಒಂದೆಡೆ ಬೃಹತ್ ಪುಸ್ತಕ ಮೇಳಕ್ಕೆ ಸಾಕ್ಷಿಯಾಗಲಿದ್ದಾರೆ. ೧೭೫ ಪುಸ್ತಕ ಮಳಿಗೆಗಳಿಗೆ ಅವಕಾಶ ಕಲ್ಪಿಸಲಾಗುತ್ತಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ. ವಿಧಾನಸೌಧದ ಸಮಿತಿ ಸಭಾಂಗಣದಲ್ಲಿ ಇಂದು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕೇರಳ ವಿಧಾನಸಭೆ ಆವರಣದಲ್ಲಿ ಆಯೋಜಿಸಿದ್ದ ಪುಸ್ತಕ ಮೇಳದಿಂದ ಸ್ಫೂರ್ತಿ ಪಡೆದು ಈ ಮೇಳ ಆಯೋಜಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><*<><>*><>

ಉತ್ತರಾಖಂಡದಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ  ಕರ್ನಾಟಕ ೨೨ ಚಿನ್ನ ೧೦ ಬೆಳ್ಳಿ ಹಾಗೂ ೧೦ ಕಂಚಿನ ಪದಕಗಳೊಂದಿಗೆ ಅಗ್ರ ಸ್ಥಾನದಲ್ಲಿದೆ. ಸರ್ವಿಸಸ್ ೧೯ ಚಿನ್ನ, ೧೦ ಬೆಳ್ಳಿ ಮತ್ತು ೯ ಕಂಚಿನೊಂದಿಗೆ ೨ನೇ ಸ್ಥಾನದಲ್ಲಿದೆ. ಮೂರನೇ ಸ್ಥಾನದಲ್ಲಿರುವ ಮಹಾರಾಷ್ಟ್ರ ೧೫ ಚಿನ್ನ, ೨೭ ಬೆಳ್ಳಿ ಮತ್ತು ೨೧ ಕಂಚಿನ ಪದಕಗಳನ್ನು ಗಳಿಸಿದೆ.

<><*<><>*><>

ಇಂದು ವಿಶ್ವ ಕ್ಯಾನ್ಸರ್ ದಿನ. ಇತ್ತೀಚಿನ ವರ್ಷಗಳಲ್ಲಿ ಕ್ಯಾನ್ಸರ್ ಕಾಯಿಲೆ ಹೆಚ್ಚಾಗುತ್ತಿದ್ದು, ಕ್ಯಾನ್ಸರ್ ರೋಗದ ಬಗ್ಗೆ ಜನರಲ್ಲಿ ಸರಿಯಾಗಿ ಜಾಗೃತಿ ಮೂಡಿಸಲು ಪ್ರತಿ ವರ್ಷ ಈ ದಿನವನ್ನು ಆಚರಿಸಲಾಗುತ್ತದೆ.  ವಿಶಿಷ್ಟತೆಯಿಂದ ಏಕತೆ' ಎಂಬ ಘೋಷವಾಕ್ಯದೊಂದಿಗೆ ವಿಶ್ವ ಕ್ಯಾನ್ಸರ್ ದಿನಾಚರಣೆಯ ಅಂಗವಾಗಿ ಬಳ್ಳಾರಿಯಲ್ಲಿ ಜನಜಾಗೃತಿ ಜಾಥಾ ನಡೆಯಿತು. ಜಿಲ್ಲಾ ಆಸ್ಪತ್ರೆ ಆವರಣದಿಂದ ಜಾಥಾ ಆರಂಭವಾಗಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿತು. ಜಾಥಾಗೆ ಚಾಲನೆ ನೀಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಸಾರ್ವಜನಿಕರು ಬೀಡಿ ಸೇದುವುದು, ತಂಬಾಕು ಗುಟ್ಕಾ ಜಗಿಯುವುದು. ಮದ್ಯ ಸೇವನೆ ಸೇರಿದಂತೆ ದುಷ್ಚಟಗಳಿಂದ ದೂರವಿರಬೇಕು ಎಂದು ಕರೆ ನೀಡಿದರು. ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಕ್ಯಾನ್ಸರ್ ಬಗ್ಗೆ ಮುನ್ನೆಚ್ಚರಿಕೆ ಕೈಗೊಳ್ಳಲಾಗುತ್ತಿದೆ ಎಂದು ಬಾಗಲಕೋಟೆ ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಕುಸುಮಾ ಮಾಗಿ ತಿಳಿಸಿದ್ದಾರೆ. ವಿಶ್ವ ಕ್ಯಾನ್ಸರ್ ದಿನಾಚರಣೆಯ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಶ್ರೀ ರಾಮ ನರ್ಸಿಂಗ್ ಕಾಲೇಜಿನಲ್ಲಿ  ಭಾರತೀಯ ವೈದ್ಯಕೀಯ ಸಂಘದ ಸಹಯೋಗದಲ್ಲಿ ಕ್ಯಾನ್ಸರ್ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಎಂದು ತಿಳಿಸಿದರು.

<><*<><>*><>

ಮೈಸೂರು ವಿಶ್ವವಿದ್ಯಾಲಯದ ವತಿಯಿಂದ ಬಾಬು .ಕೆ ವೀರೇಗೌಡ ಅವರಿಗೆ ಗೌರವ ಡಾಕ್ಟರೇಟ್ ಪದವಿಯನ್ನು ರಾಜಭವನದ ಬಾಂಕ್ವೆಟ್ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರದಾನ ಮಾಡಿದರು.  ಈ ವೇಳೆ ಮಾತನಾಡಿದ ರಾಜ್ಯಪಾಲರು, "ಮೈಸೂರು ವಿಶ್ವವಿದ್ಯಾಲಯವು ದೇಶದ ಆರನೇ ಅತ್ಯಂತ ಹಳೆಯ ವಿಶ್ವವಿದ್ಯಾಲಯ ಮತ್ತು ಕರ್ನಾಟಕ ರಾಜ್ಯದ ಮೊದಲ ವಿಶ್ವವಿದ್ಯಾಲಯವಾಗಿದೆ ಎಂದು ಶ್ಲಾಘಿಸಿದರು.

**<><*<><>*><>**

ಮಕ್ಕಳ ಆರೋಗ್ಯ ಮತ್ತು ಭವಿಷ್ಯದ ಹಿತದೃಷ್ಟಿಯಿಂದ ರೈತರು ತಮ್ಮ ಬೆಳೆಗಳಲ್ಲಿ ಹೆಚ್ಚಿನ ರಾಸಾಯನಿಕಗಳು ಬಳಸದಂತೆ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪೂರ್ ಸಲಹೆ ನೀಡಿದ್ದಾರೆ. ಯಾದಗಿರಿ ಜಿಲ್ಲಾ ಕ್ರೀಡಾಂಗಣದಲ್ಲಿಂದು ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತರು ಹೆಚ್ಚಿನ ಔಷಧಿ ಮತ್ತು ರಾಸಾಯನಿಕಗಳನ್ನು ತಮ್ಮ ಬೆಳೆಗಳಗಾಗಿ ಉಪಯೋಗಿಸಿ ಹೆಚ್ಚಿನ ಇಳುವರಿ ಪಡೆಯುವ ಮನೋಭಾವ ಬಿಡಬೇಕು. ರೈತರು ಸಾವಯವ ರಸಗೊಬ್ಬರ ಮತ್ತು ಸಿರಿಧಾನ್ಯಗಳಂತಹ ಬೆಳೆಗಳಿಗೆ ಒತ್ತು ನೀಡಬೇಕು ಎಂದು ಕರೆ ನೀಡಿದ್ದಾರೆ.

**<><*<><>*><>**

ಬೆಂಬಲ ಬೆಲೆ ಯೋಜನೆಯಡಿ ರಾಗಿ ಖರೀದಿಸಲು ಈಗಾಗಲೇ ತುಮಕೂರು ಜಿಲ್ಲೆಯಲ್ಲಿ ತೆರೆದಿರುವ ೧೦ ಖರೀದಿ ಕೇಂದ್ರಗಳಲ್ಲಿ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ.  ರೈತರು ಖರೀದಿ ಕೇಂದ್ರದಲ್ಲಿ ಮಧ್ಯವರ್ತಿಗಳನ್ನು ಸಂಪರ್ಕಿಸದೆ ನೇರವಾಗಿ ನಿಯೋಜಿತ ಅಧಿಕಾರಿಗಳನ್ನೇ ಸಂಪರ್ಕಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮನವಿ ಮಾಡಿದ್ದಾರೆ.  ರಾಗಿ ಖರೀದಿಗಾಗಿ ಖರೀದಿ ಕೇಂದ್ರಗಳಲ್ಲಿ ಮಾರ್ಚ್ ೩೧ರವರೆಗೆ ಮಾತ್ರ ಅವಕಾಶವಿದ್ದು, ರೈತರು ತಡ ಮಾಡದೇ ಅಗತ್ಯ ದಾಖಲೆಗಳೊಂದಿಗೆ ಖರೀದಿ ಕೇಂದ್ರಕ್ಕೆ ಭೇಟಿ ನೀಡಿ ನೋಂದಣಿ ಮಾಡಿಸುವಂತೆ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>  ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**